# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಕನಕಪುರ ಇವರು ಕೆ.ಪಿ.ಎಸ್.ಎಂ. ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ಧರ್ಮದರ್ಶಿ, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನ್ ಟ್ರಸ್ಟ್ (ರಿ), ಕನಕಪುರ ಇವರ ಮನವಿ ಪತ್ರ ಸಂಖ್ಯೆ:ಕೆ.ಪಿ.ಎಸ್.ಎಂ.ಎಂ.ಇ.ಟಿ./132/2017–18, ದಿನಾಂಕ:10.01.2018.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/237/ಯೋಜನೆ/2017–18, ದಿನಾಂಕ: 15.03.2018.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಮನವಿ ಪತ್ರದಲ್ಲಿ, ವ್ಯವಸ್ಥಾಪಕ ಧರ್ಮದರ್ಶಿ, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಎಂ.ಜಿ.ರಸ್ತೆ, ಕನಕಪುರ, ರಾಮನಗರ ಜಿಲ್ಲೆ ಇವರು ತಮ್ಮ ಟ್ರಸ್ಟ್ ವತಿಯಿಂದ ಕನಕಪುರದಲ್ಲಿ ಹೊಸದಾಗಿ ಡಿ. ಫಾರ್ಮಸಿ ಕೊರ್ಸ್ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ವರದಿಯಲ್ಲಿ, ಔಷಧ ನಿಯಂತ್ರಕರು, ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಕನಕಪುರ ಇವರು ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯಂತೆ ಸದರಿ ಸಂಸ್ಥೆಯು ಖಾತಾ ನಂ. 11874, ವಾರ್ಡ್ ನಂ. 21, ಕನಕಪುರ–ಮೈಸೂರು ರಸ್ತೆ, ನಾರಾಯಣಪ್ಪ ಕೆರೆ ಎದುರು, ಕನಕಪುರ, ರಾಮನಗರ ಜಿಲ್ಲೆ ಇಲ್ಲಿ ಸ್ವಂತ ಕಟ್ಟಡವನ್ನು ಹೊಂದಿದ್ದು, ಸದರಿ ಕಟ್ಟಡವು ಡಿ.ಫಾರ್ಮ ಕೋರ್ಸ್ ನಡೆಸಲು ಸೂಕ್ತವಾಗಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮಸಿ ತರಗತಿಗಳನ್ನು ಚಾಲನೆ ಮಾಡಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿರುವುದರಿಂದ, ಇವರಿಗೆ 2018–19ನೇ ಶೈಕ್ಷಣಿಕ ಸಾಲಿನಿಂದ ಕೆ.ಪಿ.ಎಸ್.ಎಂ. ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಬಹುದಾಗಿದೆಯೆಂದು ಸರ್ಕಾರಕ್ಕೆ ಅಭಿಪ್ರಾಯವನ್ನು ಸಲ್ಲಿಸಿರುತ್ತಾರೆ.

ಔಷಧ ನಿಯಂತ್ರಕರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಕನಕಪುರ ಇವರು ಕನಕಪುರದಲ್ಲಿ ಕೆ.ಪಿ.ಎಸ್.ಎಂ. ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ 2018–19ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಪ್ರಥಮ ಡಿ.ಫಾರ್ಮಸಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ

. . . 2

ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 08 ಪಿಟಿಡಿ 2018, ಬೆಂಗಳೂರು, ದಿನಾಂಕ:20.08.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಎಂ.ಜಿ.ರಸ್ತೆ, ಕನಕಪುರ, ರಾಮನಗರ ಜಿಲ್ಲೆ ಇವರು ಖಾತಾ ನಂ. 11874, ವಾರ್ಡ್ ನಂ. 21, ಕನಕಪುರ-ಮೈಸೂರು ರಸ್ತೆ, ನಾರಾಯಣಪ್ಪ ಕೆರೆ ಎದುರು, ಕನಕಪುರ, ರಾಮನಗರ ಜಿಲ್ಲೆ ಇಲ್ಲಿ 2018-19ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಕೆ.ಪಿ.ಎಸ್.ಎಂ. ಕಾಲೇಜ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸುವ ಮೊದಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಕಡ್ಡಾಯವಾಗಿ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

1) ಅಪರ ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.

2) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ವ್ಯವಸ್ಥಾಪಕ ಧರ್ಮದರ್ಶಿ, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಎಂ.ಜಿ.ರಸ್ತೆ, ಕನಕಪುರ, ರಾಮನಗರ ಜಿಲ್ಲೆ.

<u>ಪ್ರತಿಗಳು:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

2) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ವ್ಯವಸ್ಥಾಪಕ ಧರ್ಮದರ್ಶಿ, ಕೆ.ಪಿ.ಶ್ರೀಕಂಠಯ್ಯ ಮೆಮೋರಿಯಲ್ ಮಲ್ಟಿಪರ್ಪಸ್ ಎಜುಕೇಷನಲ್ ಟ್ರಸ್ಟ್ (ರಿ), ಎಂ.ಜಿ.ರಸ್ತೆ, ಕನಕಪುರ, ರಾಮನಗರ ಜಿಲ್ಲೆ.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.